## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಕರ್ನಾಟಕ ರಾಜ್ಯ ಮಹಿಳಾ ಸರ್ಕಾರಿ ನೌಕರರಿಗೆ ಋತುಚಕ್ರ ರಜಾ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ.

ಓದಲಾಗಿದೆ : ಸರ್ಕಾರಿ ಆದೇಶ ಸಂಖ್ಯೆ:ಕಾಇ 466 ಎಲ್‌ಇಟಿ 2023, ದಿನಾಂಕ:12.11.2025.

*****

**ಪ್ರಸ್ತಾವನೆ:**

ರಾಜ್ಯದಲ್ಲಿ ವಿವಿಧ ಕಾರ್ಮಿಕ ಕಾಯ್ದೆಗಳಡಿ ನೋಂದಣಿಯಾಗಿರುವ ಎಲ್ಲಾ ಕೈಗಾರಿಕೆಗಳು ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 18 ರಿಂದ 52 ವರ್ಷದ ವಯೋಮಿತಿಯ ಎಲ್ಲಾ ಖಾಯಂ/ಗುತ್ತಿಗೆ/ಹೊರಗುತ್ತಿಗೆ ಮಹಿಳಾ ನೌಕರರಿಗೆ ಋತುಚಕ್ರದ ಸಮಯದಲ್ಲಿ ಪ್ರತಿ ತಿಂಗಳು ಒಂದು ದಿನದಂತೆ ವಾರ್ಷಿಕ 12 ದಿನಗಳ ವೇತನಸಹಿತ ರಜೆಯ ಸೌಲಭ್ಯವನ್ನು ಓದಲಾದ ಸರ್ಕಾರಿ ಆದೇಶದಲ್ಲಿ ಮಂಜೂರು ಮಾಡಲಾಗಿದೆ.

ರಾಜ್ಯ ಮಹಿಳಾ ಸರ್ಕಾರಿ ನೌಕರರ ಮನೋಸ್ಥೈರ್ಯವನ್ನು ಹೆಚ್ಚಿಸುವ ಉದ್ದೇಶದಿಂದ ಪ್ರತಿ ತಿಂಗಳು ಒಂದು ದಿನದ ಋತುಚಕ್ರ ರಜೆಯ ಸೌಲಭ್ಯವನ್ನು ರಾಜ್ಯದ ಮಹಿಳಾ ಸರ್ಕಾರಿ ನೌಕರರಿಗೂ ಕಲ್ಪಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 10 ಸೇನಿಸೇ 2025, ಬೆಂಗಳೂರು, ದಿನಾಂಕ:2.12.2025**

ಸರ್ಕಾರವು ರಾಜ್ಯದ ಮಹಿಳಾ ಸರ್ಕಾರಿ ನೌಕರರಿಗೆ ಪ್ರತಿ ತಿಂಗಳು ಒಂದು ದಿನದಂತೆ ಋತುಚಕ್ರ ರಜೆಯ ಸೌಲಭ್ಯವನ್ನು ಕೆಳಕಂಡ ಷರತ್ತುಗಳಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ:

1. ಋತುಚಕ್ರ ಹೊಂದಿರುವ, 18 ರಿಂದ 52 ವಯಸ್ಸಿನ ಮಹಿಳಾ ಸರ್ಕಾರಿ ನೌಕರರು ಈ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ.
2. ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ಸಕ್ಷಮವಾದ ಪ್ರಾಧಿಕಾರಿಯು ಋತುಚಕ್ರ ರಜೆಯನ್ನು ಮಂಜೂರು ಮಾಡಬಹುದು. ಈ ರಜೆಯನ್ನು ಪಡೆಯಲು ಯಾವುದೇ ವೈದ್ಯಕೀಯ ಪ್ರಮಾಣ ಪತ್ರವನ್ನು ಒದಗಿಸುವ ಅಗತ್ಯವಿಲ್ಲ.
3. ಈ ರಜೆಯನ್ನು ರಜೆ/ಹಾಜರಾತಿ ಪುಸ್ತಕದಲ್ಲಿ ಪ್ರತ್ಯೇಕವಾಗಿ ನಮೂದಿಸತಕ್ಕದ್ದು.

...2

Scanned with CamScanner

4. ಋತುಚಕ್ರ ರಜೆಯನ್ನು ಬೇರೆ ಯಾವುದೇ ರಜೆಯೊಂದಿಗೆ ಸಂಯೋಜಿಸತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)
ದೂ.:080-22033135

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ-ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

<u>ಪ್ರತಿ:</u>

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ:5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ:5398, ಬೆಂಗಳೂರು-560001.
3. ಮಹಾಲೇಖಪಾಲರು (A&E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ:5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
8. ರೆಸಿಡೆಂಟ್ ಕಮಿಷನರ್, ಕರ್ನಾಟಕ ಭವನ, ನವದೆಹಲಿ.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
11. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
12. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.

Scanned with CamScanner